# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1106(1209) |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 18.03.2025 |
| ಉತ್ತರಿಸುವವರು | : | ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗಣಿಗಾರಿಕೆ ಇಲಾಖೆಯಲ್ಲಿ (ಒಟ್ಟು) ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು: ಖಾಲಿಯಿರುವ ಹುದ್ದೆಗಳಾವುವು: ಇವರುಗಳನ್ನು ಭರ್ತಿಮಾಡಲು ಕೈಗೊಂಡ ಕ್ರಮವೇನು?</td><td>ಗಣಿ ಮತ್ತು ಭೂವಿಜ್ಞಾನ ಇಲಾಖೆಯ ದಕ್ಷಿಣ ಕನ್ನಡ ಜಿಲ್ಲೆಯ ಹಿರಿಯ ಭೂವಿಜ್ಞಾನಿಯವರ ಕಛೇರಿಯಲ್ಲಿ ಒಟ್ಟು 12 ಸಂಖ್ಯೆಯ ಅಧಿಕಾರಿ/ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, 27 ಸಂಖ್ಯೆಯ ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳು ಖಾಲಿಯಿರುತ್ತದೆ(ವಿವರವನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ).<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 25-11-2024 ರನ್ವಯ ರಾಜ್ಯದ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸದಂತೆ ಸುತ್ತೋಲೆ ಹೊರಡಿಸಲಾಗಿದೆ(ಪ್ರತಿ ಲಗತ್ತಿಸಿದೆ), ಆದ್ದರಿಂದ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮವಾಗಿರುವುದಿಲ್ಲ.</td></tr>
<tr><td>ಆ)</td><td>ಸದರಿ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ಮರಳು ಸಾಗಾಣಿಕೆಯಲ್ಲಿ ಎಷ್ಟು ಪ್ರಕರಣ ದಾಖಲು ಮಾಡಲಾಗಿದೆ; ಈ ಬಗ್ಗೆ ಇಲಾಖೆ ಎಷ್ಟು ಕೇಸುಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. 2022-23, 2023-24 ಮತ್ತು 2024-25 ನೇ ಸಾಲಿನಲ್ಲಿ ಒಟ್ಟು ದಾಖಲಾದ ಪ್ರಕರಣ ಎಷ್ಟು: ಎಷ್ಟು ಪ್ರಕರಣಗಳಲ್ಲಿ ಶಿಕ್ಷೆ ಆಗಿದೆ: ಈ ಪ್ರಕರಣಗಳು ಯಾವ ಯಾವ ಹಂತದಲ್ಲಿದ್ದೆ; (ವರ್ಷವಾರು ವಿವರ ನೀಡುವುದು)</td><td>
<ul><li>ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳುಗಾರಿಕೆ/ ಸಾಗಾಣಿಕೆ/ ದಾಸ್ತಾನು ಚಟುವಟಿಕೆಗಳ ವಿರುದ್ಧ ಈ ಕೆಳಕಂಡಂತೆ ಕ್ರಮ ವಹಿಸಲಾಗಿರುತ್ತದೆ.</li></ul>
<table>
<tr><th>ವರ್ಷ</th><th>ಪತ್ತೆಯಾದ ಪ್ರಕರಣಗಳು</th><th>ಸಂಗ್ರಹವಾದ ದಂಡ (ರೂ.ಲಕ್ಷಗಳಲ್ಲಿ)</th><th>ದಾಖಲಾದ ಎಫ್.ಆರ್.ಆರ್/ ಪಿ.ಸಿ.ಆರ್.</th></tr>
<tr><td>2022-23</td><td>269</td><td>145.62</td><td>8</td></tr>
<tr><td>2023-24</td><td>296</td><td>179.69</td><td>33</td></tr>
<tr><td>2024-25 (ಜನವರಿ ಮಾಹೆವರೆಗೆ</td><td>173</td><td>54.04</td><td>82</td></tr>
<tr><td>ಒಟ್ಟು</td><td>738</td><td>379.35</td><td>123</td></tr>
</table>
ದಾಖಲಾಗಿರುವ ಪ್ರಕರಣಗಳು ಮಾನ್ಯ ನ್ಯಾಯಾಲಯಗಳಲ್ಲಿ ವಿಚಾರಣೆ ಹಂತದಲ್ಲಿರುತ್ತವೆ.</td></tr>
</table>

| | | |
|---|---|---|
| ಇ) | ಗಣಿಗಾರಿಕೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿಂದ ಸರ್ಕಾರಕ್ಕೆ ಬರುವ ಆದಾಯವು ಸೋರಿ ಹೋಗುತ್ತಿದ್ದು, ಅಕ್ರಮ ಗಣಿಗಾರಿಕೆಯಿಂದ ಈ ನಷ್ಟ ಭರಿಸಲು ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಸರ್ಕಾರದ ಅಧಿಸೂಚನೆ ಸಂಖ್ಯೆ: CI 21 MMN (2) 2014, Bangalore, Dated:21.01.2014 ರಲ್ಲಿ ಅನಧಿಕೃತ ಉಪ ಖನಿಜ ಗಣಿ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿರುತ್ತದೆ.<br><br>ಸರ್ಕಾರವು ದಿನಾಂಕ:01.12.2021 ರಂದು ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು-2021 ನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮ 31-R(1) (2) ರಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br><br>ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂ ವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತದೆ. ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳ ವಿರುದ್ಧ ಗಣಿ ಮತ್ತು ಖನಿಜ(ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957 ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿಯಲ್ಲಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು-1994 ರ ನಿಯಮ 31-Rರ ಉಪ ನಿಯಮ 12 ರಡಿಯಲ್ಲಿ ಸಂಬಂದಪಟ್ಟ ಪೊಲೀಸ್ ಠಾಣೆಯಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯೋಜಿಸಲಾಗಿರುತ್ತದೆ.<br><br>ಅದರಂತೆ ಸಹಾಯಕ ಆಯುಕ್ತರು, ಮಂಗಳೂರು ಉಪವಿಭಾಗ ಇವರು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ತನಿಖಾ ತಂಡಗಳನ್ನು ರಚಿಸಿದ್ದು, ಸದರಿ ತಂಡಗಳು ಗಸ್ತುಕಾರ್ಯಾಚರಣೆ ಮಾಡಿ ಅನಧಿಕೃತ ಮರಳು ಗಣಿಗಾರಿಕೆ ಚಟುಚಟಿಕೆಗಳನ್ನು ನಿಯಂತ್ರಿಸಲು ಕ್ರಮವಹಿಸುತ್ತಿದೆ. |

**ಸಿಐ 59 ಎಂಜಿಎಸ್ 2025**

(ಎಸ್. ಎಸ್. ಮಲ್ಲಿಕಾರ್ಜುನ)
ಗಣಿ ಮತ್ತು ಭೂ ವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು,

ಗಣಿ ಮತ್ತು ಭೂವಿಜ್ಞಾನ ಇಲಾಖೆ, ಉಪನಿರ್ದೇಶಕರು, ದಕ್ಷಿಣ ಕನ್ನಡ (ಮಂಗಳೂರು)

| ಕ್ರ.ಸಂ. | ಕಛೇರಿಯ ಹೆಸರು | ಮಂಜೂರಾತಿ ಹುದ್ದೆಗಳು | ಭರ್ತಿಯಾದ ಹುದ್ದೆಗಳು | ಖಾಲಿ ಹುದ್ದೆಗಳು |
|---|---|---|---|---|
| 1 | ಹಿರಿಯ ಭೂವಿಜ್ಞಾನಿ | 2 | 1 | 1 |
| 2 | ಡ್ರಿಲ್ಲಿಂಗ್ ಇಂಜಿನಿಯರ್ | 1 | 0 | 1 |
| 3 | ಭೂವಿಜ್ಞಾನಿ | 7 | 3 | 4 |
| 4 | ಮೈನಿಂಗ್ ಇಂಜಿನಿಯರ್ | 1 | 0 | 1 |
| 5 | ಅಧೀಕ್ಷಕರು | 1 | 1 | 0 |
| 6 | ಕಿರಿಯ ಇಂಜಿನಿಯರ್ | 2 | 1 | 1 |
| 7 | ಪ್ರಥಮ ದರ್ಜೆ ಸಹಾಯಕರು | 3 | 3 | 0 |
| 8 | ದ್ವಿತೀಯ ದರ್ಜೆ ಸಹಾಯಕರು | 4 | 1 | 3 |
| 9 | ಹಿರಿಯ ದತ್ತಾಂಶ ನಮೂದು ಸಹಾಯಕ / ದತ್ತಾಂಶ ನಮೂದು ಸಹಾಯಕರು(ಹೊರಗುತ್ತಿಗೆ) | 2 | 0 | 2 |
| 10 | ವಾಹನ ಚಾಲಕ ಮತ್ತು ಹಿರಿಯ ವಾಹನ ಚಾಲಕರು | 5 | 1 | 4 |
| 11 | ಅಟೆಂಡರ್ | 1 | 1 | 0 |
| 12 | ಡಿ-ಗುಂಪು | 10 | 0 | 10 |
| ಒಟ್ಟು | | 39 | 12 | 27 |

ಕರ್ನಾಟಕ ಸರ್ಕಾರ

**ಕರ್ನಾಟಕ ಸರ್ಕಾರ**

ಸಂಖ್ಯೆ:ಸಿಆಸುಇ 388 ಸೆನೆನಿ 2024

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 25.11.2024

**ಸುತ್ತೋಲೆ**

**ವಿಷಯ**: ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳ ನೇಮಕಾತಿಗಾಗಿ ಹೊಸದಾಗಿ ಅಧಿಸೂಚನೆ ಹೊರಡಿಸುವುದನ್ನು ತಡೆಹಿಡಿಯುವ ಬಗ್ಗೆ.

**ಉಲ್ಲೇಖ:** ಸಮಾಜ ಕಲ್ಯಾಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: SWD/08/SLP/2024 (P-5), ದಿನಾಂಕ: 13.11.2024

******

ದಿನಾಂಕ: 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ.

ಈ ದಿನಾಂಕದ ಪೂರ್ವದಲ್ಲಿ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿದ್ದಲ್ಲಿ ಅಥವಾ ಆಯ್ಕೆ ಪ್ರಕ್ರಿಯೆ ಪ್ರಾರಂಭಗೊಂಡಿದ್ದಲ್ಲಿ ಅಂತಹ ನೇಮಕಾತಿಗಳಿಗೆ ಹೊರಡಿಸಲಾಗಿದ್ದ ಅಧಿಸೂಚನೆಯನ್ವಯವೇ ಪೂರ್ಣಗೊಳಿಸಬಹುದಾಗಿದೆ.

ಮೇಲ್ಕಂಡ ಸೂಚನೆಗಳನ್ನು ಎಲ್ಲಾ ಆಯ್ಕೆ ಪ್ರಾಧಿಕಾರಗಳು/ನೇಮಕಾತಿ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಪಾಲಿಸತಕ್ಕದು.

ನಿರ್ದೇಶಕರ ಆಪ್ತ ಶಾಖೆ.
5018 5/12/24

25-11-2024
**(ವೀರಭದ್ರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸು ಇಲಾಖೆ (ಸೇವಾ ನಿಯಮಗಳು-1)

06/12/2024

**ಇವರಿಗೆ:**

ಸಂಕಲನಕಾರರು, ಇ-ರಾಜ್ಯಪತ್ರ

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.

EST

7/12

04 DEC 2024
9041034
560001.
560001.

-2